# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 391
ಸದಸ್ಯರ ಹೆಸರು : ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 11.12.2024
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಉತ್ತರ ಕನ್ನಡ ಜಿಲ್ಲೆಯಲ್ಲಿ ದಿನಾಂಕ: 27-04-1978ರ ಪೂರ್ವದಲ್ಲಿ ಅರಣ್ಯ ಅತಿಕ್ರಮಣ ಸಕ್ರಮಗೊಳಿಸಲು ಸರ್ಕಾರವು ಸ್ಪಷ್ಟ ಮಾರ್ಗಸೂಚಿ ಹೊರಡಿಸಿದ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಒಟ್ಟು 1832 ಪ್ರಕರಣಗಳಲ್ಲಿ ಜಿಲ್ಲಾಧಿಕಾರಿಗಳು ಸಕ್ರಮ ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಶಿರಸಿ, ಕೆನರಾ ವೃತ್ತ ವ್ಯಾಪ್ತಿಯಲ್ಲಿ ಬರುವ ವಿಭಾಗಗಳಲ್ಲಿ 1978ರ ಪೂರ್ವದ ಒಟ್ಟು 4820 ಅರಣ್ಯ ಒತ್ತುವರಿ ಪ್ರಕರಣಗಳಲ್ಲಿ 4590 ಪ್ರಕರಣಗಳನ್ನು ಭಾರತ ಸರ್ಕಾರವು ಅನುಮೋದನೆಗೊಳಿಸಿರುತ್ತದೆ. ಅವುಗಳಲ್ಲಿ 2499 ಪ್ರಕರಣಗಳು ಜಿಲ್ಲಾಧಿಕಾರಿಗಳ ಸಮಿತಿಯಿಂದ ಕ್ರಮಬದ್ಧಗೊಂಡಿವೆ ಹಾಗೂ 1298 ಪ್ರಕರಣಗಳು ತಿರಸ್ಕೃತಗೊಂಡಿರುತ್ತವೆ. ಜಿಲ್ಲಾಧಿಕಾರಿಯವರ ಸಮಿತಿಯಿಂದ ಕ್ರಮಬದ್ಧಗೊಂಡ 2499 ಪ್ರಕರಣಗಳಲ್ಲಿ 1404 ಡಿ-ನೋಟಿಫಿಕೇಶನ್ ಪ್ರಸ್ತಾವನೆಗಳನ್ನು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಕಾರ್ಯಯೋಜನೆ, ಧಾರವಾಡ ರವರ ಕಛೇರಿಗೆ ಕಳುಹಿಸಿದ್ದು, ಈ ಪೈಕಿ 747 ಪ್ರಸ್ತಾವನೆಗಳನ್ನು ಅರಣ್ಯ ಸಂರಕ್ಷಣಾಧಿಕಾರಿಗಳು ಕಾರ್ಯಯೋಜನೆ, ಧಾರವಾಡ ರವರ ಕಚೇರಿಯಿಂದ ಸಂಬಂಧಪಟ್ಟ ವಿಭಾಗಗಳಿಗೆ ಕೆಲವು ನ್ಯೂನ್ಯತೆಗಳನ್ನು ಸರಿಪಡಿಸಿ ಮರು ಸಲ್ಲಿಸುವಂತೆ ಹಿಂದಿರುಗಿಸಿದ್ದು, ಪ್ರಕ್ರಿಯೆ ಅರಣ್ಯ ಇಲಾಖೆಯಲ್ಲಿ ಪರಿಶೀಲನಾ ಹಂತದಲ್ಲಿರುತ್ತದೆ. |
| (ಆ) | ಸಕ್ರಮಗೊಳಿಸಿದ ಪ್ರಕರಣಗಳಲ್ಲಿ ಅತಿಕ್ರಮಣ ಜಮೀನು, ಕರ್ನಾಟಕ ಅರಣ್ಯ ಕಾಯ್ದೆ 1962 ಕಲಂ 28 ರಡಿ disforest donatory ಆಗದೆ ಇರುವುದರಿಂದ ಪಹಣಿ ಪತ್ರಿಕೆಯಲ್ಲಿ ಮಂಜೂರಿದಾರರ ಹೆಸರಿನ ಬದಲಾಗಿ ಈವರೆಗೆ ಅರಣ್ಯ ಇಲಾಖೆಯ ಹೆಸರೇ ಮುಂದುವರೆದಿದ್ದು ಇದರಿಂದ ಮಂಜೂರಿದಾರರು ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಡಿ-ನೋಟಿಫಿಕೇಶನ್ ಪ್ರಸ್ತಾವನೆಗಳನ್ನು ನಿರ್ವನೀಕರಣಗೊಳಿಸುವ (disforest) ಪ್ರಕ್ರಿಯೆ ಚಾಲ್ತಿಯಲ್ಲಿರುವ ಕಾರಣದಿಂದ ರೈತರ ಪಹಣಿ ಪತ್ರಿಕೆಯಲ್ಲಿ ಮಂಜೂರಿದಾರರ ಹೆಸರಿನ ಬದಲಾಗಿ ಈವರೆಗೂ ಅರಣ್ಯ ಇಲಾಖೆಯ ಹೆಸರೇ ಮುಂದುವರೆದಿರುತ್ತದೆ. |
| (ಇ) | ಬಂದಿದ್ದಲ್ಲಿ ಇದನ್ನು ನಿವಾರಿಸುವ ದೃಷ್ಟಿಯಿಂದ disforest donatory ಆಗದೆ ಇರುವ ಪ್ರಕರಣಗಳ ಕುರಿತು ಸರ್ಕಾರದ ನಿಲುವೇನು? | ಪ್ರಸ್ತುತ ಸರ್ಕಾರದಿಂದ ಮತ್ತು ಜಿಲ್ಲಾಧಿಕಾರಿಯವರ ಸಮಿತಿಯಿಂದ ಅಂಗೀಕೃತವಾದ 1978ರ ಪೂರ್ವದ ಅರಣ್ಯ ಒತ್ತುವರಿ ಪ್ರಕರಣಗಳನ್ನು ಕರ್ನಾಟಕ ಅರಣ್ಯ ಅಧಿನಿಯಮ, 1963ರ ಸೆಕ್ಷನ್ 28 ರಂತೆ ಡಿ-ನೋಟಿಫಿಕೇಶನ್ ಮಾಡಲು ಪರಿಹಾರಾತ್ಮಕವಾಗಿ (Compansatory Afforestation) ಜಿಲ್ಲೆಯಲ್ಲಿ 2499 ಪ್ರಕರಣಗಳಿಗೆ 1293.253 ಹೆಕ್ಟೇರ್ ಪರ್ಯಾಯ ಭೂಮಿಯ ಅವಶ್ಯಕತೆಯಿರುತ್ತದೆ. ಪರ್ಯಾಯ ಭೂಮಿಯನ್ನು ಗುರುತಿಸುವ ಕಾರ್ಯ ಪ್ರಗತಿಯಲ್ಲಿದೆ. |

(ಕಡತ ಸಂಖ್ಯೆ:ಆರ್‌ಡಿ 28 ಎಲ್‌ಜಿಎನ್ 2024)

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು